ಕರ್ನಾಟಕ ಲೋಕಾಯುಕ್ತ

ಸಂಖ್ಯೆ: ಕಂಪ್ಲೆಂಟ್\ಉಪಲೋಕ್\ಬಿಡಿ\8143\2015\ಸನಿಕಾಸ-1

ಬಹುಮಹಡಿಗಳ ಕಟ್ಟಡ,
ಡಾ॥ಬಿ.ಆರ್.ಅಂಬೇಡ್ಕರ್ ವೀಧಿ,
ಬೆಂಗಳೂರು, ದಿನಾಂಕ:25/02/2017

**ಕರ್ನಾಟಕ ಲೋಕಾಯುಕ್ತ ಕಾಯಿದೆ 1984ರ ಕಲಂ 12(1)ರ ಅನ್ವಯ ವರದಿ**

**ವಿಷಯ:** ದೂರುದಾರರಾದ ಶ್ರೀ.ಎಸ್.ಕೆ.ಶ್ರೀಧರ್, ಸಂಪಿಗೆ, ತುರುವೇಕೆರೆ ತಾಲ್ಲೂಕ್, ತುಮಕೂರು ಜಿಲ್ಲೆ ರವರ ದೂರನ್ನು ಪರಿಹರಿಸುವ ಬಗ್ಗೆ.

*******

ತುಮಕೂರು ಜಿಲ್ಲೆ ತುರುವೇಕೆರೆ ತಾಲ್ಲೂಕ್ ಸಂಪಿಗೆಯ ನಿವಾಸಿಯಾದ ಶ್ರೀ.ಎಸ್.ಕೆ.ಶ್ರೀಧರ್ (ಇನ್ನು ಮುಂದೆ "ದೂರುದಾರರು" ಎಂದು ಕರೆಯಲ್ಪಡುತ್ತಾರೆ) ತಮ್ಮ ದೂರಿನಲ್ಲಿ ತುಮಕೂರು ಜಿಲ್ಲೆ ತುರುವೇಕೆರೆ ತಾಲ್ಲೂಕ್ 1) ತಹಶೀಲ್ದಾರ್‌ರಾದ ಶ್ರೀ.ಮಾರೇಗೌಡ ಮತ್ತು 2) ತಾಲ್ಲೂಕ್ ಕಛೇರಿಯ ಮುಜರಾಯಿ ಗುಮಾಸ್ತರಾದ ಶ್ರೀ.ರಾಜಕುಮಾರ (ಇನ್ನು ಮುಂದೆ "1 ಮತ್ತು 2ನೇ ಎದುರುದಾರರು" ಎಂದು ಕ್ರಮವಾಗಿ, ಕರೆಯಲ್ಪಡುತ್ತಾರೆ) ರವರ ವಿರುದ್ಧ ಕರ್ತವ್ಯ ಲೋಪದ ಬಗ್ಗೆ ನೀಡಿದ ದೂರನ್ನು, ಕರ್ನಾಟಕ ಲೋಕಾಯುಕ್ತ ಕಾಯಿದೆಯ ಕಲಂ 9ರ ಅಡಿಯಲ್ಲಿ ತನಿಖೆಗೆ ತೆಗೆದುಕೊಂಡಿದ್ದಿದೆ.

2. **ದೂರಿನ ಸಂಕ್ಷಿಪ್ತ ವಿವರಣೆ:-** ತುಮಕೂರು ಜಿಲ್ಲೆ ತುರುವೇಕೆರೆ ತಾಲ್ಲೂಕು ಸಂಪಿಗೆ ಶ್ರೀ ಶ್ರೀನಿವಾಸ ದೇವಾಲಯವು ಬಿ-ದರ್ಜೆಯ ಮುಜರಾಯಿ ಇಲಾಖೆಯ ದೇವಾಲಯವಾಗಿದ್ದು, ಸದರಿ ದೇವಾಲಯದಲ್ಲಿ ದಿ:22/10/2014ರಂದು ಸುಮಾರ ₹4 ಲಕ್ಷಕ್ಕೂ ಹೆಚ್ಚು ಮೌಲ್ಯದ ಚಿನ್ನ-ಬೆಳ್ಳಿ ಆಭರಣಗಳು ಕಳ್ಳತನವಾದ ಕಾರಣ ದೇವಾಲಯದ ಸಮಿತಿಯವರು ತುರ್ತು ಸಭೆ ಕೈಗೊಂಡು ಕೆಲವು ನಿರ್ಣಯಗಳನ್ನು ಕೈಗೊಳ್ಳುವ ಸಲುವಾಗಿ ಎದುರುದಾರರಿಗೆ ಅರ್ಜಿ ಸಲ್ಲಿಸಿ 5 ತಿಂಗಳು ಕಳೆದರೂ ಸಹ ಎದುರುದಾರರು ಯಾವುದೇ ಕ್ರಮ ಕೈಗೊಂಡಿಲ್ಲವೆಂದು ಹೇಳಿದ್ದಾರೆ.

3. ದೂರಿನ ಬಗ್ಗೆ ಎದುರುದಾರರಿಂದ ಆಕ್ಷೇಪಣೆಯನ್ನು ಕೇಳಲಾಗಿ, 1 ಮತ್ತು 2ನೇ ಎದುರುದಾರರು ತಮ್ಮ ಆಕ್ಷೇಪಣೆಯಲ್ಲಿ-

ಸದರಿ ದೇವಾಲಯ ಸಮಿತಿಯವರು ದೇವಸ್ಥಾನದ ಸುರಕ್ಷತೆಗಾಗಿ ಕೆಲವೊಂದು ಬದಲಾವಣೆಗಳನ್ನು ಮಾಡುವಂತೆ ಅಂದರೆ, ತೋಟದ ಕಾಂಪೌಂಡ್‌ನ್ನು ಎತ್ತರಿಸಿ ದೇವಾಲಯದ ಬಾಗಿಲುಗಳಿಗೆ ಕಬ್ಬಿಣದ ಬಾಗಿಲುಗಳ ಕಾಮಗಾರಿಗೆ ಎಷ್ಟು ಮೊತ್ತದ ಅಂದಾಜು ಪಟ್ಟಿ ಬೇಕಾಗುತ್ತದೆಂಬ ಬಗ್ಗೆ ಅಂದಾಜು ಪಟ್ಟಿ ತಯಾರಿಸಲು ಸಹಾಯಕ ಕಾರ್ಯಪಾಲಕ ಅಭಿಯಂತರರು, ಲೋಕೋಪಯೋಗಿ ಇಲಾಖೆಯವರಿಗೆ ಪತ್ರ ಬರೆಯಲಾಗಿದೆ. ಅದೇ ರೀತಿ, ಸದರಿ ದೇವಾಲಯಕ್ಕೆ ಸಂಬಂಧಪಟ್ಟಂತೆ ರಕ್ಷಣೆ ಸಂಬಂಧ ಕಾವಲುಗಾರನಾಗಿ ಜವಾನನ ಹುದ್ದೆ ನೇಮಕಾತಿ, ಸಿಸಿ ಕ್ಯಾಮಾರಾ ಅಳವಡಿಕೆ, ಕಬ್ಬಿಣದ ಬಾಗಿಲುಗಳ ನಿರ್ಮಾಣಕ್ಕಾಗಿ ವೆಚ್ಚ ಭರಿಸಿಕೊಡಲು ತುಮಕೂರು ಜಿಲ್ಲಾಧಿಕಾರಿಗಳಿಗೆ ಪತ್ರ ಬರೆಯಲಾಗಿದೆ. ಸದರಿ ಪತ್ರಕ್ಕೆ ಹಣ ಬಿಡುಗಡೆಯಾದ ನಂತರ ಕ್ರಮ ಕೈಗೊಳ್ಳಲಾಗುವುದು. ಸದರಿ ದೇವಾಲಯದಲ್ಲಿ ದಿ:23/10/2014ರಂದು ಕಳ್ಳತನವಾಗಿರುವ ಬಗ್ಗೆ ದೂರು ನೀಡಿದ್ದು, ತನಿಖಾ ಹಂತದಲ್ಲಿದೆಯೆಂದು ಹೇಳಿದ್ದಾರೆ.

4. ಎದುರುದಾರರ ಆಕ್ಷೇಪಣೆಗೆ ದೂರುದಾರರಿಂದ ಪ್ರತ್ಯುತ್ತರವನ್ನು ಕೇಳಲಾಗಿ, ದೂರುದಾರರು ಯಾವುದೇ ಪ್ರತ್ಯುತ್ತರವನ್ನು ಸಲ್ಲಿಸಿಲ್ಲ.

5. ಕಡತ ಮತ್ತು ದಾಖಲೆಗಳನ್ನು ಕೂಲಂಕಷವಾಗಿ ಪರಿಶೀಲಿಸಲಾಗಿ, ಕಂಡು ಬರುವ ಅಂಶಗಳೇನೆಂದರೆ –

ಶ್ರೀ ಶ್ರೀನಿವಾಸ ದೇವಾಲಯದಲ್ಲಿ ದಿ:23/10/2014ರಂದು ಕಳ್ಳತನವಾಗಿದ್ದು ಈ ಬಗ್ಗೆ ಕ್ರಮ ಕೈಗೊಳ್ಳುವಂತೆ ಸಂಬಂಧಪಟ್ಟ ಪೋಲೀಸರಿಗೆ ದೂರು ನೀಡಿದ್ದು, ಪ್ರಕರಣವು ದಾಖಲಾಗಿ ತನಿಖೆ ಹಂತದಲ್ಲಿದೆ. ಆ ಸಂದರ್ಭದಲ್ಲಿ ಸದರಿ ದೇವಾಲಯದ ಸಮಿತಿಯವರು ಕೆಲವೊಂದು ಸುರಕ್ಷತಾ ಕ್ರಮ ಕೈಗೊಳ್ಳುವಂತೆ ಎದುರುದಾರರಿಗೆ ತಿಳಿಸಿದ್ದು, ಅದರಂತೆ, ಸದರಿ ದೇವಸ್ಥಾನದ ಕಾವಲುಗಾರರಾಗಿ ಜವಾನ ಹುದ್ದೆ ನೇಮಕಾತಿ ಮಾಡುವಂತೆ, ದೇವಾಲಯದ ಬಾಗಿಲುಗಳಿಗೆ ಕಬ್ಬಿಣದ ಬಾಗಿಲುಗಳನ್ನು ಅಳವಡಿಸುವಂತೆ, ಸುರಕ್ಷತೆ ದೃಷ್ಟಿಯಿಂದ ಸಿಸಿ ಕ್ಯಾಮೆರಾ ಅಳವಡಿಸುವಂತೆ, ಅಲ್ಲದೇ ಸದರಿ ದೇವಸ್ಥಾನಕ್ಕೆ ಸಂಬಂಧಿಸಿದಂತೆ ತೋಟದ ಕಾಂಪೌಂಡನ್ನು ಎತ್ತರಿಸಿ ಕಬ್ಬಿಣದ ಬಾಗಿಲ ಕಾಮಗಾರಿಗೆ ಅಂದಾಜು ಪಟ್ಟಿ ತಯಾರಿಸುವಂತೆ ಸಹಾಯಕ ಕಾರ್ಯಪಾಲಕ ಅಭಿಯಂತರರು, ಲೋಕೋಪಯೋಗಿ ಇಲಾಖೆ ದಿ:03/07/2015ರಂದು ಎದುರುದಾರರು ಪತ್ರ ಬರೆದಿದ್ದಾರೆ. ಅದೇ ರೀತಿ, ಈ ಎಲ್ಲಾ ಕಾಮಗಾರಿಗಳ ನಿರ್ವಹಣೆಗೆ ಅನುದಾನ ಮಂಜೂರಾತಿಗಾಗಿ ದಿ:06/11/2014ರಂದು ತುಮಕೂರು ಜಿಲ್ಲಾಧಿಕಾರಿಗಳಿಗೆ ಪತ್ರ ವ್ಯವಹಾರ ಮಾಡಿದ್ದಾರೆ. ದೂರುದಾರರ ಮನವಿಗೆ ಎದುರುದಾರರು ಸ್ಪಂದಿಸಿ ಈಗಾಗಲೇ

ಕಾಮಗಾರಿಗಳ ಅಭಿವೃದ್ಧಿಗೆ ಅನುದಾನ ಮಂಜೂರಾತಿಗಾಗಿ ತುಮಕೂರು ಜಿಲ್ಲಾಧಿಕಾರಿರವರಗೆ ಪತ್ರ ವ್ಯವಹಾರ ಮಾಡಿದೆ.

6. ಆದ್ದರಿಂದ, ಸದರಿ ದೇವಸ್ಥಾನದ ಸುರಕ್ಷತೆಗೆ ಅಗತ್ಯ ಕ್ರಮ ಕೈಗೊಳ್ಳಲು ಕರ್ನಾಟಕ ಲೋಕಾಯುಕ್ತ ಕಾಯಿದೆ ಕಲಂ 12(1)ರ ಅಡಿ ಪ್ರದತ್ತವಾದ ಅಧಿಕಾರದಡಿ, ಈಗ, ಈ ವರದಿ ಮೂಲಕ, ಸಕ್ಷಮ ಪ್ರಾಧಿಕಾರಕ್ಕೆ ಶಿಫಾರಸ್ಸು ಮಾಡಲಾಗುತ್ತಿದೆ.

7. ಹಾಗೆಯೇ, ಕರ್ನಾಟಕ ಲೋಕಾಯುಕ್ತ ಕಾಯಿದೆ 1984 ಕಲಂ 12(2)ರ ಪ್ರಕಾರ ಸಕ್ಷಮ ಪ್ರಾಧಿಕಾರವು, ಈ ವರದಿಯ ಮೇಲೆ ಏನು ಕ್ರಮ ಕೈಗೊಂಡಿದೆ ಅಥವಾ ಏನು ಕ್ರಮ ಕೈಗೊಳ್ಳಲಾಗುತ್ತದೆ ಎಂಬುದರ ಬಗ್ಗೆ ಈ ವರದಿಯನ್ನು ಸ್ವೀಕರಿಸಿದ ಮೂರು ತಿಂಗಳೊಳಗೆ ಈ ಪ್ರಾಧಿಕಾರಕ್ಕೆ ತಿಳಿಸಲು ಹೇಳಿದೆ.

22/2/17.

(ನ್ಯಾಯಾಮೂರ್ತಿ ಸುಬಾಷ್ ಬಿ ಅಡಿ)
ಉಪಲೋಕಾಯುಕ್ತ-2,
ಕರ್ನಾಟಕ ರಾಜ್ಯ.